ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

**ದೂರವಾಣಿ: 080-22343904/05.**

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು-560001.

ಸಂಖ್ಯೆ: ಕಾಶಿಇ/ಶೈವಿ/06/ಸುತ್ತೋಲೆ/2020-21

ದಿನಾಂಕ: 25.06.2020

# ಸುತ್ತೋಲೆ

**ವಿಷಯ:** ಜೂನ್ 26, 2020ರ ದಿನವನ್ನು ಅಂತಾರಾಷ್ಟ್ರೀಯ ಮಾದಕ ವಸ್ತುಗಳ ಸೇವನೆ ವಿರೋಧಿ ದಿನಾಚರಣೆಯಾಗಿ ಆಚರಿಸುವ ಕುರಿತು.

**ಉಲ್ಲೇಖ:** ಸರ್ಕಾರದ ಅನಧಿಕೃತ ಟಿಪ್ಪಣಿ ಸಂಖ್ಯೆ: ಒಇ 01 ಪಿಎನ್ ಡಿ 2019 ದಿನಾಂಕ:19.06.2020.

* * * * * *

ದಿನಾಂಕ:26.06.2020 ರಂದು ಅಂತಾರಾಷ್ಟ್ರೀಯ ಮಾದಕ ವಸ್ತುಗಳ ಸೇವನೆ ವಿರೋಧಿ ದಿನಾಚರಣೆಯಾಗಿ ಆಚರಿಸಿ ಸೂಕ್ತ ಫೀಡ್ ಬ್ಯಾಕ್ ನೀಡುವಂತೆ ಡೈರೆಕ್ಟರ್ ಜನರಲ್, ಎನ್.ಸಿ.ಬಿ. ನವದೆಹಲಿ, ರವರ ಪತ್ರದಲ್ಲಿ ಸೂಚಿಸಲಾಗಿದೆ. ಈ ಸಂಬಂಧ ಹಮ್ಮಿಕೊಳ್ಳಬೇಕಾಗಿರುವ ಕಾರ್ಯಕ್ರಮದ ವಿವರಗಳನ್ನು ಈ ಸುತ್ತೋಲೆಯೊಂದಿಗೆ ಲಗತ್ತಿಸಲಾಗಿದ್ದು, ರಾಜ್ಯದ ಎಲ್ಲಾ ಸರ್ಕಾರಿ / ಖಾಸಗಿ ಅನುದಾನಿತ / ಅನುದಾನ ರಹಿತ ಕಾಲೇಜುಗಳಲ್ಲಿ ದಿನಾಂಕ:26.06.2020 ರಂದು ಅಂತಾರಾಷ್ಟ್ರೀಯ ಮಾದಕ ವಸ್ತುಗಳ ಸೇವನೆ ವಿರೋಧಿ ದಿನಾಚರಣೆಯ ಅಂಗವಾಗಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಹಾಗೂ ಕೈಗೊಂಡ ಕ್ರಮದ ಬಗ್ಗೆ 'ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ವರದಿ'ಯನ್ನು ಸಂಬಂಧಿಸಿದ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ ಸಲ್ಲಿಸುವಂತೆ ಸೂಚಿಸಲಾಗಿದೆ.

ಮುಂದುವರೆದು ಇಲಾಖಾ ವ್ಯಾಪ್ತಿಯ ಪ್ರಾದೇಶಿಕ ಜಂಟಿ ನಿರ್ದೇಶಕರುಗಳು ತಮ್ಮ ಕಛೇರಿ ವ್ಯಾಪ್ತಿಗೆ ಒಳಪಡುವ ಸರ್ಕಾರಿ / ಖಾಸಗಿ ಅನುದಾನಿತ / ಅನುದಾನ ರಹಿತ ಕಾಲೇಜುಗಳಿಂದ ಮಾಹಿತಿಯನ್ನು ಪಡೆದು ಕ್ರೋಢೀಕೃತ ವರದಿಯನ್ನು ಈ ಕಛೇರಿಗೆ ಸಲ್ಲಿಸುವಂತೆ ಸೂಚಿಸಲಾಗಿದೆ.

ಅಡಕ: ಉಲ್ಲೇಖಿತ ಪತ್ರದ ಪ್ರತಿಗಳು

ಕಾಲೇಜು ಶಿಕ್ಷಣ ಹೆಚ್ಚುವರಿ ನಿರ್ದೇಶಕರು

**ಇವರಿಗೆ,**

1) ರಾಜ್ಯದ ಎಲ್ಲಾ ಸರ್ಕಾರಿ/ಖಾಸಗಿ ಅನುದಾನಿತ/ಖಾಸಗಿ ಅನುದಾನ ರಹಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2) ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ.
3) ಆಯುಕ್ತರ, ನಿರ್ದೇಶಕರ, ಮುಖ್ಯ ಆಡಳಿತಾಧಿಕಾರಿಗಳ, ಹೆಚ್ಚುವರಿ ನಿರ್ದೇಶಕರ, ಜಂಟಿ ನಿರ್ದೇಶಕರ ಆಪ್ತಶಾಖೆ, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು.
4) ಮಾಹಿತಿ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.

**ಪ್ರತಿ;**

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತಶಾಖೆ, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
2) ಸರ್ಕಾರದ ಅಧೀನ ಕಾರ್ಯದರ್ಶಿಗಳು, (ಪೋಲಿಸ್ ಸೇವೆಗಳು-ಬಿ) ಒಳಾಡಳಿತ ಇಲಾಖೆ, ಬೆಂಗಳೂರು.
3) ಕಛೇರಿ ಪ್ರತಿ.